ಇಂದು ದಿ:**02-08-2025** ರಂದು ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲುಃ ಶ್ರೀ ಬಿ.ಎಸ್ ವಕೀಲರಿಂದ 3 ಮತ್ತು 4 ನೇ ಪ್ರತಿವಾದಿಗಳ ಪರಃ**

ದಾವಾ ಆಸ್ತಿಗಳು ಮೂಲತಃ ನನ್ನ ತಂದೆಗೆ ಸಂಬಂಧಪಟ್ಟ ಆಸ್ತಿಗಳು ಇರುತ್ತವೆ. ನನ್ನ ತಂದೆಗೆ ನಾವು 6 ಜನ ಮಕ್ಕಳು ಇರುತ್ತೇವೆ. ಅವರೆಂದರೆ ನಾನು, 2 ಮತ್ತು 3 ನೇ ವಾದಿ, ಪ್ರತಿವಾದಿ ನಂ.2 ರಿಂದ 4. ಪ್ರತಿವಾದಿ ನಂ.3 ಮತ್ತು 4 ಸಹ ನನ್ನ ಮದುವೆಯ ಸಮಯದಲ್ಲಿ ಸಾಕಷ್ಟು ಹಣ ಖರ್ಚು ಮಾಡಿದ್ದಾರೆ ಎಂದರೆ ಸರಿಯಲ್ಲ. ನನ್ನ ಮದುವೆಯ ಸಮಯದಲ್ಲಿ ಬಂಗಾರ ಕೊಟ್ಟಿದ್ದರು ಎಂದರೆ ಸರಿ. ಸಾಕ್ಷಿ ನನ್ನ ತಾಯಿ ಕೊಟ್ಟಿದ್ದರು ಎಂದು ಹೇಳುತ್ತಾರೆ. ನಮ್ಮ ಕುಟುಂಬದ ನಿರ್ವಹಣೆಯನ್ನು ನನ್ನ ತಾಯಿ ಮಾಡುತ್ತಿದ್ದರು. ನಾವೆಲ್ಲರೂ ಅವರಿಗೆ ಕೈಜೋಡಿಸುತ್ತಿದ್ದೇವು. ದಾವಾ ಆಸ್ತಿಗಳಲ್ಲಿ 2 ರಿಂದ 4 ನೇ ಪ್ರತಿವಾದಿಯರಿಗೆ ಮಾತ್ರ ಹಕ್ಕು ಮತ್ತು ಹಿತಾಸಕ್ತಿ ಎಂದರೆ ಸರಿಯಲ್ಲ. ನಮಗೆ ದಾವಾ ಆಸ್ತಿಗಳಲ್ಲಿ ಯಾವುದೇ ಹಿಸ್ಸೆ ಇಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಯರಿಗೆ ತೊಂದರೆ ಕೊಡಲು ಸುಳ್ಳು ದಾವೆ ಸಲ್ಲಿಸಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾ. ದಲ್ಲಿ ಸಾಕ್ಷಿ ಹೇಳಿಕೆಯಂತೆ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪಡಿಸಿದೆ).

ಓ ಹೇ ಕೇ ಸರಿ ಇದೆ.

ಸಹಿ/-
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ, ಹರಿಹರ.